## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : 2017-18ನೇ ಸಾಲಿನ ರಾಜ್ಯ ಆಯವ್ಯಯದ ಘೋಷಣೆಯನ್ವಯ KSBDB ಗೆ ನಿಗದಿಪಡಿಸಲಾದ ರೂ.500.00ಲಕ್ಷಗಳ ಅನುದಾನದ ಪೈಕಿ ರೂ.113.00ಲಕ್ಷಗಳನ್ನು MGIRED ಯಲ್ಲಿ ಮಾದರಿ ಪಾರಂಪರಿಕ ಗ್ರಾಮವನ್ನು ಅಳವಡಿಸುವ ಯೋಜನೆಗೆ ಬಿಡುಗಡೆ ಮಾಡುವ ಕುರಿತು ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

ಓದಲಾಗಿದೆ :
1. ಸರ್ಕಾರದ ಆದೇಶ ಸಂಖ್ಯೆ ಗ್ರಾಅಪ 36 ಜೈಅಯೋ 2017 , ದಿನಾಂಕ 22.05.2017
2. ಆರ್ಥಿಕ ಇಲಾಖೆಯ ಸಹಮತಿ ಸಂಖ್ಯೆ ಆಇ/312/ವೆಚ್ಚ-6/2017, ದಿನಾಂಕ 15.05.2017.

**ಪ್ರಸ್ತಾವನೆ :**

2017-18ನೇ ಸಾಲಿನ ರಾಜ್ಯ ಆಯವ್ಯಯ ಘೋಷಣೆಯಲ್ಲಿ ಕರ್ನಾಟಕ ರಾಜ್ಯ ಜೈವಿಕ ಇಂಧನ ಮಂಡಳಿಗೆ ಸಂಬಂಧಿಸಿದಂತೆ ಬಯೋ ಡಿಸೇಲ್ ಕಾಂಪ್ಲೆಕ್ಸ್ ಮತ್ತು ಜೈವಿಕ ಇಂಧನ ಗುಣಮಟ್ಟದ ಪ್ರಯೋಗ ಶಾಲೆಯನ್ನು ನಿರ್ಮಿಸಲು ರೂ.500.00ಲಕ್ಷಗಳನ್ನು ಲೆಕ್ಕ ಶೀರ್ಷಿಕೆ **2501-04-105-0-03-059(ಯೋಜನೆ)**ಯಡಿ ಒದಗಿಸಿದೆ.

ಆರ್ಥಿಕ ಹಾಗೂ ಯೋಜನಾ ಇಲಾಖೆಯ ಸಹಮತಿ ಮೇರೆಗೆ ಆಯವ್ಯಯದಡಿ ಘೋಷಿಸಲಾದ ಅನುದಾನ ರೂ.500.00 ಲಕ್ಷಗಳ ಪೈಕಿ ಕರ್ನಾಟಕ ರಾಜ್ಯ ಜೈವಿಕ ಇಂಧನ ಮಂಡಳಿಗೆ ಜೈವಿಕ ಇಂಧನ ಗುಣಮಟ್ಟದ ಪ್ರಯೋಗ ಶಾಲೆ ಹಾಗೂ ಅಗತ್ಯ ಚಟುವಟಿಕೆಗಳಿಗೆ ರೂ.387.00ಲಕ್ಷಗಳನ್ನು ಬಿಡುಗಡೆ ಮಾಡುವ ಕುರಿತಂತೆ ಆಡಳಿತಾತ್ಮಕ ಮಂಜೂರಾತಿಯನ್ನು ಮೇಲೆ (1) ರಲ್ಲಿ ಓದಲಾದ ಆದೇಶದಲ್ಲಿ ಹೊರಡಿಸಿದೆ.

ಬಾಕಿ ಉಳಿದ ಅನುದಾನ ರೂ.113.00 ಲಕ್ಷಗಳನ್ನು ಕಾರ್ಯನಿರ್ವಾಹಕ ನಿರ್ದೇಶಕರು, MGIRED, ಬೆಂಗಳೂರು ರವರಿಗೆ MGIRED ಯಲ್ಲಿ ಮಾದರಿ ಪಾರಂಪರಿಕ ಗ್ರಾಮವನ್ನು ಅಳವಡಿಸುವ ಯೋಜನೆಗೆ ಬಿಡುಗಡೆ ಮಾಡುವ ಕುರಿತು ವ್ಯವಸ್ಥಾಪಕ ನಿರ್ದೇಶಕರು, KSBDB, ಬೆಂಗಳೂರು ರವರಿಗೆ ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರ ತೀರ್ಮಾನಿಸಿದೆ. ಪ್ರಯುಕ್ತ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ ; ಗ್ರಾಅಪ/36/ಜೈಅಯೋ/2017, ಬೆಂಗಳೂರು, ದಿನಾಂಕ 23.05.2017.**

ಪ್ರಸ್ತಾವನೆಯಲ್ಲಿ ವಿವರಿಸಲಾದಂತೆ, ಮೇಲೆ (1)ರಲ್ಲಿ ಓದಲಾದಂತೆ 2017-18ನೇ ಸಾಲಿನಲ್ಲಿ ರಾಜ್ಯ ಆಯವ್ಯಯದಡಿ ಘೋಷಿಸಲಾದಂತೆ ರೂ.500.00ಲಕ್ಷಗಳ ಪೈಕಿ **ರೂ.387.00ಲಕ್ಷ**ಗಳನ್ನು ಜೈವಿಕ ಇಂಧನ ಗುಣಮಟ್ಟದ ಪ್ರಯೋಗ ಶಾಲೆ ಹಾಗೂ ಅಗತ್ಯ ಚಟುವಟಿಕೆಗಳಿಗಾಗಿ ಮಂಜೂರು ಮಾಡುವ ಕುರಿತಂತೆ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಜೈವಿಕ ಇಂಧನ ಮಂಡಳಿ, ಬೆಂಗಳೂರು ರವರಿಗೆ ಆಡಳಿತಾತ್ಮಕ ಅನುಮೋದನೆಯನ್ನು ನೀಡಿದೆ.

ಇನ್ನುಳಿದ ರೂ.113.00ಲಕ್ಷ(ಒಂದು ನೂರಾ ಹದಿಮೂರು ಲಕ್ಷ ರೂಪಾಯಿಗಳು ಮಾತ್ರ)ಗಳನ್ನು MGIREDಯಲ್ಲಿ ಮಾದರಿ ಪಾರಂಪರಿಕ ಗ್ರಾಮವನ್ನು ಅಳವಡಿಸುವ ಯೋಜನೆಗೆ ಕಾರ್ಯನಿರ್ವಾಹಕ ನಿರ್ದೇಶಕರು, MGIRED, ಬೆಂಗಳೂರು ರವರಿಗೆ ಬಿಡುಗಡೆ ಮಾಡುವ ಕುರಿತು ವ್ಯವಸ್ಥಾಪಕ ನಿರ್ದೇಶಕರು, KSBDB, ಬೆಂಗಳೂರುರವರಿಗೆ ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಿದೆ.

ಈ ಆಡಳಿತಾತ್ಮಕ ಅನುಮೋದನೆಯನ್ವಯ ವ್ಯವಸ್ಥಾಪಕ ನಿರ್ದೇಶಕರು, KSBDB ರವರು MGIREDಯಲ್ಲಿ ಮಾದರಿ ಪಾರಂಪರಿಕ ಗ್ರಾಮವನ್ನು ಅಳವಡಿಸುವ ಯೋಜನೆಗಾಗಿ ರೂ.113.00ಲಕ್ಷಗಳ ಅನುದಾನ ಬಿಡುಗಡೆ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಸಹಮತಿ ಸಂಖ್ಯೆ:ಆಇ/312/ವೆಚ್ಚ-6/2017, ಆರ್ಥಿಕ ಇಲಾಖೆ (ವೆಚ್ಚ-6) ದಿನಾಂಕ 15.05.2017 ರಲ್ಲಿ ಪಡೆದು ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎನ್. ಕೃಷ್ಣಪ್ಪ)
ನಿರ್ದೇಶಕರು (ಗ್ರಾಮೂಸೌ-2) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಯೋಜನಾ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
4. ವ್ಯವಸ್ಥಾಪಕ ನಿರ್ದೇಶಕರು, KSBDB ಬೆಂಗಳೂರು.
5. ಕಾರ್ಯನಿರ್ವಾಹಕ ನಿರ್ದೇಶಕರು, MGIRED, ಬೆಂಗಳೂರು
6. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಪ್ರತಿಯನ್ನು

1. ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್) ರವರ ಆಪ್ತ ಕಾರ್ಯದರ್ಶಿ, ಗ್ರಾಅಪಂ ರಾಜ್ ಇಲಾಖೆ.
2. ನಿರ್ದೇಶಕರು, ಪಿಎಂಐ, ಗ್ರಾಅಪಂ.ರಾಜ್ ಇಲಾಖೆ.
3. ಉಪ ನಿರ್ದೇಶಕರು (ತಾಂತ್ರಿಕ), ಗ್ರಾಮೂಸೌ ಕೋಶ, ಗ್ರಾಅಪ ಇಲಾಖೆ.
4. ಉಪ ನಿರ್ದೇಶಕರು, TNMC, 2ನೇ ಮಹಡಿ, ಖನಿಜ ಭವನ, ಬೆಂಗಳೂರು.
5. ವಿಶೇಷಾಧಿಕಾರಿ, ಇಲಾಖಾ ಗಣಕ ಕೇಂದ್ರ, ಗ್ರಾಅಪಂ.ಇಲಾಖೆ.
6. ರಕ್ಷಾ ಕಡತಕ್ಕೆ / ಹೆಚ್ಚುವರಿ ಪ್ರತಿ.